**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: 976/2023**

**ಪಿಡಬ್ಲ್ಯೂ- 4**
**ಸಿಡಬ್ಲ್ಯೂ- 8**

**ಸಾಕ್ಷಿಗೆ ದಿನಾಂಕ 20-02-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | : ಜಯಪ್ಪ |
| ತಂದೆಯ ಹೆಸರು | : ಓಂಕಾರಪ್ಪ |
| ವಯಸ್ಸು | : 51 ವರ್ಷ |
| ಉದ್ಯೋಗ | : ಎ.ಎಸ್.ಐ, ಹೊಸದುರ್ಗ |
| ವಾಸಸ್ಥಳ | : ಹೊಸದುರ್ಗ |

**ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ**

ನಾನು ದಿಃ 05-01-2023 ರಿಂದ ಇಲ್ಲಿಯವರೆಗೆ ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಸಹಾಯಕ ಪೊಲೀಸ್ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕಃ 02-04-2023 ರಂದು ಮಧ್ಯಾಹ್ನ 2 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ನಾನು ಠಾಣೆಯ ಕರ್ತವ್ಯದಲ್ಲಿ ಇದ್ದು ಚಾ.ಸಾ-1 ರವರು ನಿ.ಪಿ-4 ರ ಜ್ಞಾಪನವನ್ನು ನೀಡಿದ್ದು ಅದನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆಃ 145/2023 ರಂತೆ ಪ್ರ.ವ.ವರದಿಯನ್ನು ತಯಾರಿಸಿ ಮೇಲಾಧಿಕಾರಿಗಳಿಗೆ ಮತ್ತು ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಸಂಜೆ ಚಾ.ಸಾ-1 ರವರು ದಾಳಿ ಮಾಡಿ ವಶಪಡಿಸಿಕೊಂಡ ಮಾಲುಗಳನ್ನು ಮತ್ತು ಅಮಾನತ್ತು ಪಂಚನಾಮೆಯನ್ನು ಸ್ವೀಕರಿಸಿ ಹೊಸದುರ್ಗ ಮಾಲು ಪಟ್ಟಿ ಸಂಖ್ಯೆಃ 83/2023 ರಂತೆ ತಯಾರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ದಿಃ 28-04-2023 ರಂದು ಪಂಚರಾದ ಚಾ.ಸಾ-2 ರಿಂದ 5 ರವರ ವಿಚಾರಣೆ ಮಾಡಿ ಅವರ ಹೇಳಿಕೆಗಳನ್ನು ದಾಖಲಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಪ್ರಕರಣದ ಮುಂದಿನ ತನಿಖೆಗಾಗಿ ಕಡತವನ್ನು ಚಾ.ಸಾ-9 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಸಾಕ್ಷಿಯು ಜ್ಞಾಪನವನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-**4** ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-**4**(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**6** ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-**6**(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಮಾಲುಪಟ್ಟಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**7** ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-**7**(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಚಾ.ಸಾ-**2** ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-**2** ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-**2**(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಚಾ.ಸಾ-**3** ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-**3** ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-**3**(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಚಾ.ಸಾ-**4** ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**8** ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-**8**(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಚಾ.ಸಾ-**5** ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**9** ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-**9**(ಎ) ಎಂದು ಗುರುತಿಸಲಾಯಿತು.

ಚಾ.ಸಾ-**1** ರವರು ರಾಸಾಯನಿಕ ಪರೀಕ್ಷೆಗಾಗಿ ಮಾದರಿಗೆ ತೆಗೆದು ಹಾಜರು ಮಾಡಿದ ಪೌಚ್ ಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ಒಟ್ಟಾಗಿ ಮು.ಮಾ-**1** ಎಂದು ಗುರುತಿಸಲಾಗಿದೆ.

**ಪಾಟೀ ಸವಾಲು ಶ್ರೀ ಒ.ಎಂ ಆರೋಪಿ ಪರ ವಕೀಲರಿಂದಃ**

ನಾನು ಚಾ.ಸಾ-1 ರವರಿಂದ ಯಾವುದೇ ಜ್ಞಾಪನವನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಪ್ರ.ವ.ವರದಿಯನ್ನು ನಾನೇ ತಯಾರು ಮಾಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮಾಲುಪಟ್ಟಿಯನ್ನು ತಯಾರಿಸಿರುತ್ತೇನೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಚಾ.ಸಾ-2 ರಿಂದ 5 ರವರ ಹೇಳಿಕೆಗಳನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಎಲ್ಲಾ ದಾಖಲೆಗಳನ್ನು ಠಾಣೆಯಲ್ಲೇ ಸೃಷ್ಠಿ ಮಾಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ

ಸರಿಯಲ್ಲ. ದಾಳಿ ಮಾಡುವ ಮೊದಲೇ ಪ್ರ.ವ.ವರದಿಯನ್ನು ತಯಾರಿಸಿರುತ್ತೇವೆ ಎಂದರೆ ಸರಿಯಲ್ಲ.

ಠಾಣಾ ಅಂಕಿಸಂಖ್ಯೆಗೋಸ್ಕರ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆ ಎಂದರೆ ಸರಿಯಲ್ಲ. ನಿ.ಪಿ-1 ರಿಂದ 9 ರ ದಾಖಲೆಗಳನ್ನು ಠಾಣೆಯಲ್ಲೇ ಸೃಷ್ಠಿಸಿರುತ್ತೇನೆ ಎಂದರೆ ಸರಿಯಲ್ಲ. ಮು.ಮಾ ಗೂ ಆರೋಪಿಗೂ ಮತ್ತು ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ಮೇಲಾಧಿಕಾರಿಗಳ ಒತ್ತಡದ ಮೇರೆಗೆ ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೆ.ಸರಿ ಅದೆ.**

**ನನ್ನ ಸಮಕ್ಷಮ**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ**
**ಪ್ರ.ದ.ನ್ಯಾ.ದಂಡಾಧಿಕಾರಿಗಳು,**
**ಹೊಸದುರ್ಗ.**